ಬಿಡುಗಡೆಯಾದ ಅನುದಾನ

2678 (3697); ಶ್ರೀ ಈಶ್ವರ್ ಭೀಮಣ್ಣ ಖಂಡ್ರೆ (ಭಾಲ್ಕಿ)

ಅ) ಬೀದರ್ ಜಿಲ್ಲೆಗೆ ಕಳೆದ 3 ವರ್ಷಗಳಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆವತಿಯಿಂದ ಗಂಗಾ ಕಲ್ಯಾಣ ಯೋಜನೆಗೆ ಬಿಡುಗಡೆ ಮಾಡಿದ ಅನುದಾನದಲ್ಲಿ ಎಷ್ಟು ಕೊಳವೆ ಬಾವಿಗಳನ್ನು ಕೊರೆಯಲಾಗಿದೆ (ವಿಧಾನಸಭಾವಾರು ವಿವರ ನೀಡುವುದು);

ಆ) ಹಾಗಿದ್ದಲ್ಲಿ, ಕೊಳವೆ ಬಾವಿಗಳಲ್ಲಿ ಎಷ್ಟು ಮೋಟಾರ್ ಪಂಪ್‌ಸೆಟ್‌ಗಳಿಗೆ ಹಾಗೂ ವಿದ್ಯುತ್ ಸಂಪರ್ಕ ನೀಡಲಾಗಿದೆ;

ಇ) ಪಂಪ್‌ಸೆಟ್‌ಗಳಿಗೆ ವಿದ್ಯುತ್ ಸಂಪರ್ಕ ನೀಡದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಬರದಿದ್ದರೆ ಇದಕ್ಕೆ ಏನು ಕಾರಣ ಇಂತಹವರ ಮೇಲೆ ಏನು ಕ್ರಮ ಜರುಗಿಸಲಾಗುವುದು?

ಶ್ರೀ ಹೆಚ್. ಆಂಜನೇಯ (ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು)

ಅ) ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಗಂಗಾ ಕಲ್ಯಾಣ ಯೋಜನೆಯಡಿ ಕಳೆದ 3 ವರ್ಷಗಳಲ್ಲಿ ಒಟ್ಟು 285 ಕೊಳವೆ ಬಾವಿಗಳನ್ನು ಕೊರೆಯಲಾಗಿದೆ. ವಿಧಾನಸಭಾ ಕ್ಷೇತ್ರವಾರು ವಿವರ ಮುಂದಿನಂತಿದೆ.

ಕ್ರ. ಸಂ.	ವಿಧಾನ ಸಭಾ ಕ್ಷೇತ್ರದ ಹೆಸರು	ಕೊರೆದ ಕೊಳವೆ ಬಾವಿಗಳ ಸಂಖ್ಯೆ
1	ಬೀದರ್ ನಗರ	51
2	ಬೀದರ್ ದಕ್ಷಿಣ	54
3	ಹುಮನಾಬಾದ್	49
4	ಭಾಲ್ಕಿ	45
5	ಔರಾದ	45

6	ಬಸವಕಲ್ಯಾಣ	41
	ಒಟ್ಟು	**285**

ಆ) 139 ಕೊಳವೆ ಬಾವಿಗಳ ಮೋಟಾರ್ ಪಂಪ್‌ಸೆಟ್‌ಗಳಿಗೆ ವಿದ್ಯುತ್ ಸಂಪರ್ಕ ನೀಡಲಾಗಿದೆ.

ಇ) ಹೌದು

ಈ) ಕೊಳವೆ ಬಾವಿ ಕೊರೆದ ನಂತರ ವಿದ್ಯುತ್ ಮಂಜೂರಾತಿಗಾಗಿ ಕೋರಿ ವಿದ್ಯುತ್ ಸರಬರಾಜು ಕಂಪನಿಗಳಲ್ಲಿ ನೊಂದಾಯಿಸಿದ ನಂತರ ವಿದ್ಯುತ್ ಮಂಜೂರಾತಿ ನೀಡಿ ವಿದ್ಯುತ್ ಕಾಮಗಾರಿಗಳನ್ನು ಕೈಗೊಳ್ಳಲು ಹೆಚ್ಚಿನ ಸಮಯ ತೆಗೆದುಕೊಳ್ಳುತ್ತಿರುವುದು ವಿದ್ಯುತ್ ಸಂಪರ್ಕ ಕಲ್ಪಿಸುವ ಕಾರಣ ವಿಳಂಬವಾಗುತ್ತಿದೆ. ಬಾಕಿ ಇರುವ ಕೊಳವೆ ಬಾವಿಗಳಿಗೆ ವಿದ್ಯುದ್ದೀಕರಣಗೊಳಿಸುವ ಕೆಲಸ ವಿವಿಧ ಹಂತಗಳಲ್ಲಿ ಪ್ರಗತಿಯಲ್ಲಿರುತ್ತದೆ. ಈ ಬಗ್ಗೆ ಕ್ರಮ ಜರುಗಿಸುವ ಅಗತ್ಯತೆ ಉದ್ಭವಿಸುವುದಿಲ್ಲ.

ಗಂಗಾ ಕಲ್ಯಾಣ ಯೋಜನೆಗೆ ಬಿಡುಗಡೆ ಮಾಡಿದ ಅನುದಾನದ ವಿವರ

2679 (3698); ಶ್ರೀ ಈಶ್ವರ್ ಭೀಮಣ್ಣ ಖಂಡ್ರೆ (ಭಾಲ್ಕಿ)

ಅ) ಬೀದರ್ ಜಿಲ್ಲೆಗೆ ಕಳೆದ 3 ವರ್ಷಧ ಅವಧಿಯಲ್ಲಿ ಗಂಗಾ ಕಲ್ಯಾಣ ಯೋಜನೆಗೆ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ; (ವಿವರ ನೀಡುವುದು)

ಆ) ಬಿಡುಗಡೆ ಮಾಡಲಾದ ಅನುದಾನದಲ್ಲಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಎಷ್ಟು ಫಲಾನುಭವಿಗಳಿಗೆ ಕೊಳವೆಬಾವಿ ಮಂಜೂರು ಮಾಡಲಾಗಿದೆ; (ಇವುಗಳಲ್ಲಿ ಎಷ್ಟನ್ನು ಕೊರೆಯಲಾಗಿದೆ);

ಇ) ಎಷ್ಟು ಪಂಪ್‌ಗಳಿಗೆ ವಿದ್ಯುತ್ ಸಂಪರ್ಕ ನೀಡಲಾಗಿದೆ (ವಿಧಾನಸಭಾವಾರು ವಿವರ ನೀಡುವುದು)